# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ

ಮಲ್ಲೇಶ್ವರಂ, ಬೆಂಗಳೂರು–560003.

# KARNATAKA SECONDARY EDUCATION EXAMINATION BOARD

Malleshwaram, Bengaluru – 560003.

## 2020-21 ಸಾಲಿನ ಮಾದರಿ ಪ್ರಶ್ನೆ ಪತ್ರಿಕೆ – 1

**ವಿಷಯ : ಪ್ರಥಮ ಭಾಷೆ – ಕನ್ನಡ** | **ವಿಷಯ ಸಂಕೇತ : 01-K**

**ಅವಧಿ : 3 ಗಂಟೆ 15 ನಿಮಿಷ** | **ಗರಿಷ್ಠ ಅಂಕಗಳು : 100**

**ಶಾಲಾ ಅಭ್ಯರ್ಥಿಗಳಿಗೆ**

---

## ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ 45 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

**I.** **ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** **6 x 1 = 6**

1. 'ಕಣ್ದೆರೆ' ಪದ ಈ ಸಮಾಸಕ್ಕೆ ಉದಾಹರಣೆಯಾಗಿದೆ.

   A. ತತ್ಪುರುಷ

   B. ದ್ವಿಗು

   C. ಗಮಕ

   D. ಕ್ರಿಯಾ

2. ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಬಳಸುವ ಲೇಖನ ಚಿಹ್ನೆ ಇದು.

   A. ಪೂರ್ಣ ವಿರಾಮ

   B. ಅರ್ಧವಿರಾಮ

   C. ಅಲ್ಪವಿರಾಮ

   D. ಭಾವಸೂಚಕ

3. ಹಳಗನ್ನಡದ ಪಂಚಮೀ ವಿಭಕ್ತಿ ಪ್ರತ್ಯಯವಿದು.

   A. ಇಂದಂ

   B. ಅನ್ನು

   C. ಅತ್ತಣಿಂ

   D. ಒಳ್

4. 'ಧಗಧಗ' ಪದ ಈ ಅವ್ಯಯಕ್ಕೆ ಉದಾಹರಣೆ.

   A. ಅನುಕರಣಾವ್ಯಯ

   B. ಸಾಮಾನ್ಯಾರ್ಥಕಾವ್ಯಯ

   C. ಕ್ರಿಯಾರ್ಥಕಾವ್ಯಯ

   D. ಭಾವಸೂಚಕಾವ್ಯಯ

5. 'ಇಸವಾಸ' ಪದದ ಗ್ರಾಂಥಿಕ ರೂಪವಿದು.

   A. ವಿಶೇಷ

   B. ವಿಶ್ವಾಸ

   C. ವಿಷವಾಸ

   D. ವಿಶದ

6. ಇವುಗಳಲ್ಲಿ ವಿಧ್ಯರ್ಥಕ ಕ್ರಿಯಾರೂಪವಿದು.

A. ಮಾಡೀತು

B. ಮಾಡದು

C. ಮಾಡಲಿ

D. ಮಾಡಿಯಾವು

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4 x 1 = 4**

7. ಯುದ್ಧ : ಜುದ್ದ : : ಪ್ರಸಾದ : ____________

8. ಸ್ವರಗಳು : ಹದಿಮೂರು : : ಯೋಗವಾಹಗಳು : ____________

9. ಅಬ್ಬೆ : ತಾಯಿ : : ಅರ್ತಿ : ____________

10. ಊರೂರು : ಲೋಪ : : ಕೈಯನ್ನು : ____________

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7 x 1 = 7**

11. ರಾಹಿಲನು ಯಾರು?

12. ಗಡಿ ಪ್ರದೇಶದಲ್ಲಿ ವಿಮಾನದಾಳಿಯಿಂದ ರಕ್ಷಿಸಿಕೊಳ್ಳಲು ಯಾವ ನಿಯಮ ಪಾಲಿಸಲಾಗುತ್ತದೆ?

13. ವಚನಕಾರರಿಗೆ ಯಾವುದು ದೇವರಾಗಿತ್ತು?

14. ಶಾನುಭೋಗರು ಇರಸಾಲಿಗಾಗಿ ಯಾವ ಊರಿಗೆ ಹೋಗಿದ್ದರು?

15. ಹಕ್ಕಿಯು ತನ್ನ ಚುಂಚವನ್ನು ದಿಗ್ಮಂಡಲಗಳ ಆಚೆಗೆ ಚಾಚಲು ಕಾರಣವೇನು?

16. ಕರ್ಣನು ಚತುರಂಗ ಬಲದಲಿ ಹೇಗೆ ಹೋರಾಡುವೆನೆಂದು ಹೇಳುತ್ತಾನೆ?

17. ಪುಟ್ಟಪೋರಿ ಏನು ಮಾಡುತ್ತಿದ್ದಾಳೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **10 x 2 = 20**

18. ನಿರ್ಜೀವವಾಗಿದ್ದ ಮಗುವನ್ನು ನೋಡಿ ಮುದುಕಿ ನಿರಾಶೆಯಿಂದ ಹೇಳಿದ ಮಾತುಗಳನ್ನು ತಿಳಿಸಿ.

19. ಶಬರಿಯು ರಾಮ ಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ತಿಳಿಸಿ.

20. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳಾವುವು?

21. ಧರ್ಮಬುದ್ಧಿಗೆ ದುಷ್ಟಬುದ್ಧಿಯು ನೀಡಿದ ಸಲಹೆಯನ್ನು ತಿಳಿಸಿ.

22. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು?

23. ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸುತ್ತಾನೆ?

24. ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರ ಅಭಿಪ್ರಾಯವನ್ನು ತಿಳಿಸಿ.

25. ವಸಂತನ ವಿಚಾರದಲ್ಲಿ ಪುಟ್ಟಿಯ ಪ್ರಶ್ನೆಗಳಾವುವು?

26. ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಏನು ಹೇಳುತ್ತದೆ?

27. ಉತ್ತರಾಣಿ ಗಿಡದ ವಿಶೇಷತೆ ಒಗಟಿನಲ್ಲಿ ಹೇಗೆ ವ್ಯಕ್ತವಾಗಿವೆ?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2 x 3 = 6**

28. ಪು.ತಿ. ನರಸಿಂಹಾಚಾರ್

29. ರನ್ನ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ. 1 x 3 = 3**

30. ಕಾದದಿರೆನಜ್ಜ ಪಾಂಡವ
ರಾದರ್ ಮೇಣಿಂದಿನೊಂದೆ ಸಮರದೊಳಾಂ ಮೇ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ. ಲಕ್ಷಣ ಬರೆದು ಸಮನ್ವಯಗೊಳಿಸಿ. 1 x 3 = 3**

31. "ಸಿಡಿಲ ಸಿಡಿದ್ಹಾಂಗ ಗುಂಡು ಸುರಿದಾವ"

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1 x 3 = 3**

32. ತಾಳಿದವನು ಬಾಳಿಯಾನು

ಅಥವಾ

ಕಾಯಕವೇ ಕೈಲಾಸ

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 6 x 3 = 18**

33. "ತಾವು ಕಡಿಮೆ ಮಾತನಾಡಿದ್ದೀರಿ ; ಹೆಚ್ಚು ಕೆಲಸ ಮಾಡಿದ್ದೀರಿ."

34. "ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ"

35. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"

36. "ಮುಂಗಾರಿನ ಮಳೆಯಾಗೋಣ"

37. "ಸಾರ್ವಭೌಮರಾ ನೆತ್ತಿಯ ಕುಕ್ಕಿ"

38. "ರವಿಸುತನ ಕಿವಿಯಲಿ ಬಿತ್ತಿದನು ಭಯವ"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. 1 x 4 = 4**

39. ಹಸುರಾಗಸ ______________________

______________________________

______________________________

________________________ ಬಿಸಿಲೂ !

ಅಥವಾ

ಹೊಸ ಹೂವಿನ ____________________

______________________________

______________________________

______________________ ಯುಸಿರೂ !

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1 x 4 = 4**

40. ಕೊಡಲಿ ಕೋರೆ ಕುಡ ಕಬ್ಬಿಣ ಮೊಸರು ಬೆಣ್ಣಿ ಹಾಲಾ
ಉಪ್ಪು ಎಣ್ಣಿ ಅರಿಸಿಣ ಜೀರಗಿ ಅಕ್ಕಿ ಸಕ್ಕಾರಿ ಬೆಲ್ಲಾ
ಗಂಗಳ ಚೆರಗಿ ಮಂಗಳ ಸೂತ್ರ ಹೋದವು ಬೀಸುಕಲ್ಲಾ
ಹಾಳಾಗಿ ಹೋಯಿತು ಅತ್ತು ವರ್ಣಿಸಿ ಹೇಳಲಿ ನಾನೆಷ್ಟಾ

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **2 x 4 = 8**

41. ಹುಲಿಯು ಶಾನುಭೋಗರನ್ನು ಕೊಲ್ಲಲು ಬಂದ ಸಂದರ್ಭದಲ್ಲಿ ನಡೆದ ಘಟನೆಯನ್ನು ನಿಮ್ಮ ಮಾತುಗಳಲ್ಲಿ ವಿವರಿಸಿ.

ಅಥವಾ

ಮೂರ್ತಿರಾಯರ ದೃಷ್ಟಿಯಲ್ಲಿ ಹುಲಿಯು ಬೇಟೆಯಾಡುವ ಬಗೆಯನ್ನು ವಿವರಿಸಿ.

42. ಲವನು ಯಜ್ಞಾಶ್ವವನ್ನು ಕಟ್ಟಲು ಕಾರಣವಾದ ಅಂಶಗಳನ್ನು ವಿವರಿಸಿ.

ಅಥವಾ

ಲವನ ಧೈರ್ಯ ಮತ್ತು ಸಾಹಸ ವೀರಲವ ಪದ್ಯದಲ್ಲಿ ಹೇಗೆ ಮೂಡಿಬಂದಿದೆ ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** **1 x 4 = 4 (2 + 2)**

ವಿಶ್ವದ ಬಹುಭಾಷಾ ಪ್ರಪಂಚದಲ್ಲಿ ಸುಮಾರು ನಾಲ್ಕು ಸಾವಿರ ಭಾಷೆಗಳಿರುತ್ತವೆ ಎಂದು ತಿಳಿದು ಬಂದಿದೆ. ದೇಶ, ಕಾಲ, ವಂಶ, ಪರಂಪರೆ ಇತ್ಯಾದಿ ಕಾರಣಗಳಿಂದ ಅವು ಬೇರೆ ಬೇರೆಯಾಗಿ ಭಿನ್ನ ಭಿನ್ನ ಸನ್ನಿವೇಶಗಳಲ್ಲಿ ಬೆಳೆದು ಬಂದಿರುತ್ತವೆ. ಆಯಾ ಸನ್ನಿವೇಶಗಳಿಗನುಸಾರ ಆಯಾ ಜನತೆಯ ಜ್ಞಾನಾರ್ಜಿತ ಸ್ವತ್ತುಗಳಿಗನುಸಾರ ಭಾಷೆಗಳ ಬೆಳವಣಿಗೆಯಾಗುತ್ತಿದೆ. ಭಾಷೆಗಳನ್ನು ವ್ಯಾವಹಾರಿಕ ಮತ್ತು ಗ್ರಾಂಥಿಕ ಎಂದು ಎರಡು ತೆರನಾಗಿ ವಿಭಾಗಿಸುವುದುಂಟು, ವ್ಯಾವಹಾರಿಕವೆಂದರೆ ಜೀವದ್ಭಾಷೆ, ಅದರಲ್ಲಿ ಜನರು ಮಾತನಾಡುತ್ತಾರೆ, ವ್ಯವಹರಿಸುತ್ತಾರೆ. ಕನ್ನಡ, ತಮಿಳು, ತೆಲುಗು, ತುಳು, ಮರಾಠಿ, ಉರ್ದು, ಇಂಗ್ಲಿಷ್ ಇವು ಇದಕ್ಕೆ ಉದಾಹರಣೆ. ಗ್ರಾಂಥಿಕವೆಂದರೆ ಅಭಿವೃದ್ಧಿ ಹೊಂದಿ ಗ್ರಂಥ ರಚನೆಯಲ್ಲಿ ಉಪಯೋಗವಾದ ಭಾಷೆ. ಸಂಸ್ಕೃತ, ಕನ್ನಡ, ಇಂಗ್ಲಿಷ್, ಪಾಳಿ ಇತ್ಯಾದಿ ಈ ವರ್ಗಕ್ಕೆ ಉದಾಹರಣೆ. ಎಲ್ಲ ವ್ಯಾವಹಾರಿಕ ಭಾಷೆಗಳು ಗ್ರಾಂಥಿಕವಾಗಬೇಕಿಲ್ಲ. ತುಳು ಒಂದು ಸುಂದರ ವ್ಯಾವಹಾರಿಕ ಭಾಷೆ. ಆದರೆ ಅದು ಗ್ರಾಂಥಿಕ ಭಾಷೆಯಲ್ಲ. ಹಾಗೆಯೇ ಎಲ್ಲ ಗ್ರಾಂಥಿಕ ಭಾಷೆಗಳು ಇಂದು ವ್ಯಾವಹಾರಿಕವಾಗಿ ಇರುವುದಿಲ್ಲ. ದೇವಭಾಷೆ ಎನ್ನಿಸಿಕೊಂಡ ಸಂಸ್ಕೃತ ಸರ್ವಸಂಪನ್ನತೆಯಿಂದ ಕೂಡಿದ ಗ್ರಾಂಥಿಕ ಭಾಷೆಯಾಗಿದೆ. ಆದರೆ ಇಂದು ಯಾವೊಂದು ಪ್ರದೇಶದಲ್ಲಿಯೂ ಅದು ವ್ಯಾವಹಾರಿಕ ಭಾಷೆಯಾಗಿರುವುದಿಲ್ಲ.

43. ಪ್ರಶ್ನೆಗಳು

ಅ) ವ್ಯಾವಹಾರಿಕ ಮತ್ತು ಗ್ರಾಂಥಿಕ ಭಾಷೆಯ ಲಕ್ಷಣಗಳನ್ನು ತಿಳಿಸಿ.

ಬ) ಭಾಷೆಗಳ ಬೆಳವಣಿಗೆ ಹೇಗೆ ಆಗುತ್ತದೆ?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. 1 x 5 = 5**

44. ನಿಮ್ಮನ್ನು ಶಿವಮೊಗ್ಗದ ಸರ್ಕಾರಿ ಪ್ರೌಢಶಾಲೆಯ '**ಕೌಶಿಕ್**' ಎಂದು ಭಾವಿಸಿಕೊಂಡು ಮೈಸೂರಿನ ಮೃಗಾಲಯದ ವೀಕ್ಷಣೆಗೆ ಸಮಯಾವಕಾಶ ಕೋರಿ ಅಲ್ಲಿನ ವ್ಯವಸ್ಥಾಪಕರಿಗೆ ಮನವಿ ಪತ್ರವನ್ನು ಬರೆಯಿರಿ.

ಅಥವಾ

ನಿಮ್ಮನ್ನು ಹಾಸನದ ಸರ್ಕಾರಿ ಪ್ರೌಢಶಾಲೆಯ '**ವೇದಶ್ರೀ**' ಎಂದು ಭಾವಿಸಿಕೊಂಡು ಶಾಲೆಯಲ್ಲಿ ಹಮ್ಮಿಕೊಂಡಿರುವ 'ವಿಜ್ಞಾನ ವಸ್ತು ಪ್ರದರ್ಶನ'ಕ್ಕೆ ಆಹ್ವಾನಿಸಿ ತುಮಕೂರಿನ ಕುವೆಂಪುನಗರದಲ್ಲಿ ವಾಸವಾಗಿರುವ '**ಲಿಖಿತ್**' ಎಂಬ ಹೆಸರಿನ ಗೆಳೆಯನಿಗೆ ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. 1 x 5 = 5**

45. ಗ್ರಂಥಾಲಯಗಳ ಮಹತ್ವ

ಅಥವಾ

ಮತದಾನದ ಮಹತ್ವ